ಕರ್ನಾಟಕ ಸರ್ಕಾರ
ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.
Email:Commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ: ಪಿಯು-1/3026/ಸಿಬ್ಬಂದಿ/ಎನ್‌ಓಸಿ/ಸಿಆರ್4/2015-16 ದಿನಾಂಕ3 -11 -2016.

**ಜ್ಞಾಪನ**

ವಿಷಯ:- ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ವಿವಿಧ ಇಲಾಖೆಗಳಲ್ಲಿ ಆಹ್ವಾನಿಸಿರುವ ಹುದ್ದೆಗಳಿಗೆ ಅನುಮತಿ ನೀಡುವ ಬಗ್ಗೆ.

ಉಲ್ಲೇಖ:- ಉಪನಿರ್ದೇಶಕರು/ಪ್ರಾಚಾರ್ಯರ ಮನವಿ ಪತ್ರಗಳು

****

ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳು ಜಿಲ್ಲಾ ಉಪನಿರ್ದೇಶಕರ/ಪ್ರಾಂಶುಪಾಲರುಗಳ ಮುಖಾಂತರ ಉಲ್ಲೇಖಿತ ಪತ್ರಗಳಲ್ಲಿ ವಿವಿಧ ಇಲಾಖೆಗಳಲ್ಲಿ ಆಹ್ವಾನಿಸಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಉಪನ್ಯಾಸಕರಿಗೆ ಹೆಸರಿನ ಮುಂದೆ ತೋರಿಸಿರುವ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಷರತ್ತಿಗೊಳಪಟ್ಟು ಅನುಮತಿ ನೀಡಿದೆ

| ಕ್ರ.ಸ | ಹೆಸರು, ಹುದ್ದೆ ಮತ್ತು ಕಾಲೇಜು ವಿಳಾಸ ಶ್ರೀಮತಿ/ಶ್ರೀ | ಅನುಮತಿ ಕೋರಲಾದ ಹುದ್ದೆ |
|---|---|---|
| 1 | ಸುಬ್ರಮಣ್ಯ ಎಂ ಎನ್<br>ರಾಜ್ಯಶಾಸ್ತ್ರ ಉಪನ್ಯಾಸಕರು<br>ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು,<br>ಪಾಲಿಟೆಕ್ನಿಕ್ ರಸ್ತೆ, ಚಿಂತಾಮಣಿ,<br>ಚಿಕ್ಕಬಳ್ಳಾಪುರ ಜಿಲ್ಲೆ | ಕರ್ನಾಟಕ ಲೋಕಾ ಸೇವಾ ಆಯೋಗ ನಡೆಸುವ ಸಬ್ ರಿಜಿಸ್ಟರ್ ಹುದ್ದೆಗೆ |
| 2 | ಸಂತೋಷ್ ಕುಮಾರ್ ಹೆಚ್<br>ಸಮಾಜಶಾಸ್ತ್ರ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು,<br>ಚಿಕ್ಕಜಂಬೂರು, ಶಿಕಾರಿಪುರ,<br>ಶಿವಮೊಗ್ಗ ಜಿಲ್ಲೆ. | ಕರ್ನಾಟಕ ಲೋಕಾ ಸೇವಾ ಆಯೋಗ ನಡೆಸುವ ಸಬ್ ರಿಜಿಸ್ಟರ್ ಹುದ್ದೆಗೆ |
| 2 | ಸಿದ್ದೇಶ್ವರಪ್ಪ ಡಿ,<br>ರಾಜ್ಯಶಾಸ್ತ್ರ ಉಪನ್ಯಾಸಕರು.<br>ಸರ್ಕಾರಿ ಪದವಿ ಪೂರ್ವ ಕಾಲೇಜು.<br>ಚಿಕ್ಕಜಂಬೂರು. ಶಿಕಾರಿಪುರ,<br>ಶಿವಮೊಗ್ಗ ಜಿಲ್ಲೆ. | ಕರ್ನಾಟಕ ಲೋಕಾ ಸೇವಾ ಆಯೋಗ ನಡೆಸುವ ಸಬ್ ರಿಜಿಸ್ಟರ್ ಹುದ್ದೆಗೆ |
| 4 | ಶಂಕರಪ್ಪ ಎಂ,<br>ಇತಿಹಾಸ ಉಪನ್ಯಾಸಕರು,<br>ಸರ್ಕಾರಿ ಪದವಿ ಪೂರ್ವ ಕಾಲೇಜು.<br>ಅಗಲಕೋಟೆ ಹ್ಯಾಂಡ್ ಪೋಸ್ಟ್,<br>ಮಾಗಡಿ ತಾ॥, ರಾಮನಗರ ಜಿಲ್ಲೆ. | ಕರ್ನಾಟಕ ಲೋಕಾ ಸೇವಾ ಆಯೋಗ ನಡೆಸುವ ಉಪ ನೊಂದಾಣಾಧಿಕಾರಿ. |

ಷರತ್ತುಗಳು:

1. ಸದರಿ ಸಿಬ್ಬಂದಿಗಳು, ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು. ಸಿಬ್ಬಂದಿಗಳು, ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
2. ಸದರಿ ಸಿಬ್ಬಂದಿಗಳು/ಉಪನ್ಯಾಸಕರುಗಳು, ವಿದ್ಯಾರ್ಥಿಗಳ ಪಾಠ-ಪ್ರವಚನಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ, ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.
3. ಸದರಿ ಸಿಬ್ಬಂದಿಗಳು ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿ ಬರುವಂತಿಲ್ಲ.
4. ಸದರಿ ಸಿಬ್ಬಂದಿಗಳು/ಉಪನ್ಯಾಸಕರುಗಳು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ, ಈಗ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯತಕ್ಕದ್ದು.

ಉಪ ನಿರ್ದೇಶಕರು (ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು,

1. ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರಿಗೆ. ಮಾಹಿತಿಗಾಗಿ
2. ಸಂಬಂಧಿಸಿದ ಉಪನ್ಯಾಸಕರುಗಳಿಗೆ ಪ್ರಾಚಾರ್ಯರ ಮೂಲಕ
3. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು- ಅಂತರ್ಜಾಲದಲ್ಲಿ ಪ್ರಕಟಿಸಲು
4. ಕಛೇರಿ ಪ್ರತಿ.